# All India Radio: Bangalore
# Regional Bulletin In Kannada
# 08.02.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 08.02.2025 / 2.30 p.m.

**<><><><>**

ಮುಖ್ಯಾಂಶಗಳು

1. ಸಿರಿಧಾನ್ಯ ಬೆಳೆಯುವ ರೈತರಿಗೆ ಸಹಾಯದ ಪ್ರಮಾಣದಲ್ಲಿ ಹೆಚ್ಚಳ : ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಭರವಸೆ
2. ರಾಜ್ಯದಲ್ಲಿ ಆಟೋಮೋಟಿವ್ ಕೈಗಾರಿಕಾ ಕೇಂದ್ರ ಸ್ಥಾಪನೆಗಾಗಿ ನೂರು ಎಕರೆ ಜಮೀನು ನೀಡುವಂತೆ ಕೇಂದ್ರದಿಂದ ರಾಜ್ಯ ಸರ್ಕಾರಕ್ಕೆ ಪತ್ರ - ಸಚಿವ ಹೆಚ್.ಡಿ.ಕುಮಾರಸ್ವಾಮಿ
3. ದೇಶಾದ್ಯಂತ ಇದೇ ೧೪ರಂದು ಏಕಕಾಲದಲ್ಲಿ ವರ್ಷದ ಪ್ರಥಮ ರಾಷ್ಟ್ರೀಯ ಲೋಕ ಅದಾಲತ್ ಆಯೋಜನೆ
4. ಬಳ್ಳಾರಿ ಜಿಲ್ಲೆ ತೆಕ್ಕಲಕೋಟೆ ಸಮೀಪ ಬೆಟ್ಟದಲ್ಲಿ ಪುರಾತನ ಮಾನವ ಪಳಿಯುಳಿಕೆ ಅವಶೇಷ ಪತ್ತೆ

<><><><>

ಸಿರಿಧಾನ್ಯಗಳನ್ನು ಬೆಳೆಸುವ ರೈತರಿಗೆ ನೀಡಲಾಗುವ ಸಹಾಯದ ಪ್ರಮಾಣವನ್ನು ಹೆಚ್ಚಿಸಲಾಗುವುದು ಎಂದು ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಡೆಯುತ್ತಿರುವ ಅಂತಾರಾಷ್ಟ್ರೀಯ ವಾಣಿಜ್ಯ ಮೇಳ - ಉತ್ಪಾದನೋತ್ತರ ಕೃಷಿ, ರೈತರ ಸಬಲೀಕರಣ ಕಾರ್ಯಕ್ರಮದಲ್ಲಿ ಅವರು ಇಂದು ಪಾಲ್ಗೊಂಡು ಮಾತನಾಡಿದರು. ರಾಜ್ಯ ಸರ್ಕಾರ ಸಲ್ಲಿಸಿದ ಎಲ್ಲ ಕೃಷಿ ಪ್ರಸ್ತಾಪಗಳಿಗೆ ಕೇಂದ್ರ ಸರ್ಕಾರ ಸ್ಪಂದಿಸಿದೆ ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಕೃಷಿ ಕುರಿತಾದ ಪುಸ್ತಕ ಬಿಡುಗಡೆ ಮಾಡಿದರು ಹಾಗೂ ಮೇಳದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ಸಂಸ್ಥೆಗಳಿಗೆ ಬಹುಮಾನ ವಿತರಿಸಿದರು.

<><><><>

ರಾಜ್ಯದಲ್ಲಿ ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ - ಅರೈ ಘಟಕ ಸ್ಥಾಪಿಸುವ ಮೂಲಕ ನಿರುದ್ಯೋಗ ಸಮಸ್ಯೆ ನಿವಾರಿಸಲು ಕೇಂದ್ರ ಸರ್ಕಾರ ಮುಂದಾಗಿದೆ ಎಂದು ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಮೈಸೂರಿನಲ್ಲಿ ಕೇಂದ್ರ ಬಜೆಟ್ ಕುರಿತು ನಡೆದ ಪತ್ರಿಕಾಗೋಷ್ಠಿಯಲ್ಲಿ ಇಂದು ಮಾತನಾಡಿದ ಅವರು, ೨೦೨೬-೨೭ರ ಕೇಂದ್ರ ಬಜೆಟ್‌ನಲ್ಲಿ ಕಟ್ಟಡ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದು ಹೇಳಿದರು. ಮಂಡ್ಯದಲ್ಲಿ ಅರೈ ಘಟಕ ಸ್ಥಾಪನೆಗಾಗಿ ೧೦೦ ಎಕರೆ ಭೂಮಿ ನೀಡುವಂತೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ಈ ಯೋಜನೆಗೆ ಒಟ್ಟು ೭ ಸಾವಿರದ ೨೮೦ ಕೋಟಿ ರೂಪಾಯಿ ಮೀಸಲಿಡಲಾಗಿದ್ದು, ಪ್ರಾಥಮಿಕ ಹಂತದಲ್ಲಿ ೫೦೦ ಕೋಟಿ ರೂ. ಬಿಡುಗಡೆ ಮಾಡಲಾಗುತ್ತದೆ. ಇದರಿಂದ ನಿರುದ್ಯೋಗ ಸಮಸ್ಯೆ ತಗ್ಗಿಸಲು ಸಾಧ್ಯವಾಗಲಿದೆ ಎಂದು ಹೇಳಿದರು. ಭದ್ರಾವತಿಯ ವಿಶ್ವೇಶ್ವರಯ್ಯ ಉಕ್ಕಿನ ಕಾರ್ಖಾನೆಯ ಪುನಶ್ಚೇತನಕ್ಕಾಗಿ ೪ ಸಾವಿರದ ೫೦೦ ರಿಂದ ೫ ಸಾವಿರ ಕೋಟಿ ರೂಪಾಯಿ ಬಿಡುಗಡೆಗೊಳಿಸಲಾಗುವುದು ಎಂದು ಸಚಿವ ಕುಮಾರಸ್ವಾಮಿ ತಿಳಿಸಿದರು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ನಡುವೆ ಉತ್ತಮ ಸಮನ್ವಯ ಇದ್ದರೆ ರಾಜ್ಯಕ್ಕೆ ಅಗತ್ಯವಿರುವ ಯೋಜನೆಗಳನ್ನು ಪಡೆದುಕೊಳ್ಳಲು ಸಾಧ್ಯವಾಗುತ್ತದೆ. ಈ ಬಾರಿಯ ಬಜೆಟ್‌ನಲ್ಲಿ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಮಹತ್ವ ನೀಡಲಾಗಿದೆ. ಜೊತೆಗೆ ಕ್ಯಾನ್ಸರ್ ಚಿಕಿತ್ಸೆಗೆ ಸಂಬಂಧಿಸಿದ ೧೭ ಔಷಧಿಗಳಿಗೆ ತೆರಿಗೆ ವಿನಾಯಿತಿ ನೀಡಲಾಗಿದೆ ಎಂದು ಅವರು ವಿವರಿಸಿದರು. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬಿಬಿಎಂಪಿ ಸೇರಿದಂತೆ ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿ ಪಕ್ಷಗಳು ಒಗ್ಗಟ್ಟಾಗಿ ಸ್ಪರ್ಧಿಸಲಿವೆ ಎಂದು ಜೆಡಿಎಸ್ ನಾಯಕರೂ ಆಗಿರುವ ಕುಮಾರಸ್ವಾಮಿ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><><><>

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಮಾರ್ಚ್ ೧೪ ರಂದು ದೇಶಾದ್ಯಂತ ಏಕಕಾಲದಲ್ಲಿ ವರ್ಷದ ಪ್ರಥಮ 'ರಾಷ್ಟ್ರೀಯ ಲೋಕ ಅದಾಲತ್' ಆಯೋಜಿಸಲಾಗಿದೆ ಎಂದು ದಾವಣಗೆರೆ ಜಿಲ್ಲಾ

ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಕರೆಣ್ಣವರ್ ತಿಳಿಸಿದ್ದಾರೆ. ರಾಷ್ಟ್ರೀಯ ಲೋಕ್ ಅದಾಲತ್ ಹಿನ್ನೆಲೆಯಲ್ಲಿ ದಾವಣಗೆರೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಇದು ಶುಲ್ಕ ರಹಿತ ಸೇವೆಯಾಗಿದೆ. ಲೋಕ ಅದಾಲತ್‌ನಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಯಾವುದೇ ನ್ಯಾಯಾಲಯದ ಶುಲ್ಕ ಇರುವುದಿಲ್ಲ. ಈಗಾಗಲೇ ಪಾವತಿಸಲಾದ ನ್ಯಾಯಾಲಯ ಶುಲ್ಕವನ್ನು ಪ್ರಕರಣ ಇತ್ಯರ್ಥವಾದ ನಂತರ ಪೂರ್ಣವಾಗಿ ಮರುಪಾವತಿಸಲಾಗುವುದು ಎಂದು ಅವರು ತಿಳಿಸಿದ್ದಾರೆ. ಇಲ್ಲಿ ನೀಡಲಾಗುವ ತೀರ್ಪು ಸಿವಿಲ್ ನ್ಯಾಯಾಲಯದ ಡಿಕ್ರಿಗೆ ಸಮನಾಗಿದ್ದು, ಇದರ ವಿರುದ್ಧ ಮೇಲ್ಮನವಿಗೆ ಅವಕಾಶವಿರುವುದಿಲ್ಲ. ಇದರಿಂದ ಸಮಯ ಮತ್ತು ಹಣ ಉಳಿತಾಯವಾಗಲಿದೆ. ಉಭಯ ಕಡೆಯವರು ಸೌಹಾರ್ದಯುತವಾಗಿ ರಾಜಿ ಮಾಡಿಕೊಳ್ಳುವುದರಿಂದ ವೈರತ್ವ ಕೊನೆಗೊಂಡು ಸಂಬಂಧಗಳು ಸುಧಾರಿಸುತ್ತವೆ ಎಂದರು.

<><><>

ಬಳ್ಳಾರಿ ಜಿಲ್ಲೆ ಸಿರುಗುಪ್ಪ ತಾಲೂಕಿನ ತೆಕ್ಕಲಕೋಟೆ ಪಟ್ಟಣದ ಸಮೀಪದ ಬೆಟ್ಟ ಪ್ರದೇಶದಲ್ಲಿ ಪುರಾತನ ಮಾನವ ಪಳಿಯುಳಿಕೆ, ಮಡಿಕೆಗಳು ಹಾಗೂ ಇತರೆ ವಸ್ತುಗಳು ಪತ್ತೆಯಾಗಿವೆ. ಅಮೆರಿಕದ ಹಾರ್ಟ್‌ವಿಕ್ ವಿಶ್ವವಿದ್ಯಾಲಯದ ಪ್ರಾಧ್ಯಾಪಕಿ ನಮಿತಾ ಎಸ್ ಸುಗಂಧಿ ನೇತೃತ್ವದ ಮೂರು ತಂಡಗಳು ಗ್ರೀಸ್ ವಿಶ್ವವಿದ್ಯಾಲಯದ ಜೈವಿಕ ತಂತ್ರಜ್ಞೆ ಸುಸೇನ್ ಕ್ರಿಕ್ ಪ್ಯಾಟ್ರಿಕ್ ಸ್ಮಿತ್ ಮಾರ್ಗದರ್ಶನದಲ್ಲಿ ಕಳೆದ ಎರಡು ತಿಂಗಳಿಂದ 'ಹಿರೇ ಅರ್ಲ' 'ಬೂದಿ ದಿಬ್ಬ' 'ಬಾಳೆ ತೋಟ' 'ಜಕ್ಕೇರು ಗುಡ್ಡ' ಹಾಗೂ 'ಹುಡೇದಗುಡ್ಡ' ಸುತ್ತಲಿನ ಹಲವು ಸ್ಥಳಗಳಲ್ಲಿ ಉತ್ಖನನ ಹಾಗೂ ಸಂಶೋಧನೆ ನಡೆಸಿದ್ದಾರೆ. ನವಶಿಲಾಯುಗದ ಜನರ ಕುರುಹುಗಳು, ಅವರ ನಿತ್ಯ ಬಳಕೆಗೆ ಬಳಸುತ್ತಿದ್ದ ಚೂಪಾದ ಕಲ್ಲಿನ ಆಯುಧಗಳು, ಕೈ ಕೊಡಲಿ, ಪ್ರಾಣಿಗಳ ಹಲ್ಲು, ದಿನ ಬಳಕೆ ವಸ್ತುಗಳು, ಒರಳು, ಗುಂಡು, ವಿವಿಧ ವಿನ್ಯಾಸದ ಮಡಿಕೆಗಳು, ಪ್ರಾಣಿಗಳ ಎಲುಬುಗಳು, ಶಿಲಾಯುಧಗಳ ಅವಶೇಷಗಳು ಲಭಿಸಿವೆ. ನವಶಿಲಾಯುಗ ಸಂಸ್ಕೃತಿಯ ಶಿಲಾಯುಧ ಕಾರ್ಖಾನೆಯಾಗಿದ್ದ ಇಲ್ಲಿನ ನೆಲೆಗಳು ಅಧ್ಯಯನಾಸಕ್ತರಿಗೆ ಸೂಕ್ತ ಸ್ಥಳವಾಗಿದೆ ಎಂದು ನಮಿತಾ ಅಭಿಪ್ರಾಯಪಟ್ಟಿದ್ದಾರೆ. ೪ ರಿಂದ ೫ ಸಾವಿರ ವರ್ಷಗಳ ಹಿಂದಿನ ಮಾನವನ ಶರೀರದ

ಪಳಿಯುಳಿಕೆ ಪತ್ತೆಯಾಗಿದೆ. ಸುಮಾರು ೫.೫ ಅಡಿ ಉದ್ದದ ದೇಹ ಅವಶೇಷ ಪತ್ತೆಯಾಗಿದ್ದು, ಆ ಕಾಲದ ಶವ ಸಂಸ್ಕಾರವು ವಿಶಿಷ್ಟವಾಗಿದೆ. ಇಲ್ಲಿನ ಮಾನವ ದೇಹದ ಮೇಲೆ ಕಲ್ಲುಗಳನ್ನು ಇಟ್ಟು ಶವ ಸಂಸ್ಕಾರ ಮಾಡುತ್ತಿದ್ದರು ಎಂದು ತಿಳಿದುಬರುತ್ತದೆ ಎಂದು ಅವರು ತಿಳಿಸಿದ್ದಾರೆ. ಉತ್ಖನನ ತಂಡದಲ್ಲಿ ಐ ಐ ಟಿ ಕಾನ್ಪುರದ ಡಾ. ಯಶಸ್ವಿನಿ ಜಯದೇವಯ್ಯ, ಕಲಬುರಗಿ ಸೆಂಟ್ರಲ್ ಯೂನಿವರ್ಸಿಟಿಯ ಸಂಶೋಧನಾರ್ಥಿ ಜಿ. ರೋಹಿಣಿ ಹಾಗೂ ಅಶೋಕ ಅಬಕಾರಿ ಭಾಗವಹಿಸಿದ್ದಾರೆ.

<><><><>

ಹಾವೇರಿ ಜಿಲ್ಲೆಯ ಹಾನಗಲ್ಲ ನಗರದಲ್ಲಿ ಇಂದು ಲಿಂಗೈಕ್ಯ ಶ್ರೀ ಕುಮಾರ ಮಹಾಶಿವಯೋಗಿಗಳವರ ೯೬ನೇಯ ಪುಣ್ಯ ಸ್ಮರಣೋತ್ಸವ ಹಾಗೂ ಕುಮಾರಜ್ಜನ ಉತ್ಸವ - ೨೦೨೬ ಕಾರ್ಯಕ್ರಮ ನಡೆಯಿತು. ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಮಾತನಾಡಿ, ಬದುಕಿನಲ್ಲಿ ನಾವು ಮಾಡುತ್ತಿರುವ ಕೆಲಸದಿಂದ ಹಲವಾರು ಜನರಿಗೆ ಅನುಕೂಲವಾದರೆ ಅದು ಸಾಧನೆ ಎಂದರು. ಈ ಸಂಧರ್ಭದಲ್ಲಿ ವಿವಿಧ ಮಠಾಧೀಶರು ಪಾಲ್ಗೊಂಡು ಗೌರವ ನಮನ ಸಲ್ಲಿಸಿದರು.

<><><><>

ಕೇಂದ್ರೀಯ ನೇರ ತೆರಿಗೆ ಮಂಡಳಿ, ೨೦೨೫ ರ ಆದಾಯ ತೆರಿಗೆ ಕಾಯ್ದೆಯ ಉದ್ದೇಶಿತ ನಿಯಮಾವಳಿ, ನಮೂನೆ ನಿರೂಪಣೆ ಕುರಿತಂತೆ ಸಂಬಂಧಪಟ್ಟವರಿಂದ ಸಲಹೆ ಸೂಚನೆಗಳನ್ನು ಆಹ್ವಾನಿಸಿದೆ. ರಾಷ್ಟ್ರಪತಿಯವರಿಂದ ಅನುಮೋದನೆ ಪಡೆದಿರುವ ಆದಾಯ ತೆರಿಗೆ ಕಾಯ್ದೆ ಬರುವ ಏಪ್ರಿಲ್ ಒಂದನೇ ತಾರೀಖಿನಿಂದ ಜಾರಿಗೆ ಬರಲಿದೆ. ಅಂತಿಮ ಅಧಿಸೂಚನೆಗೆ ಮುನ್ನ ಉದ್ದೇಶಿತ ಆದಾಯ ತೆರಿಗೆ ನಿಯಾಮಾವಳಿ ಹಾಗೂ ನಮೂನೆಗಳನ್ನು ಅಧಿಕೃತ ಜಾಲತಾಣ ುಟಿಛಿoಟಜಣಚಿಘುಟಿಜುಚಿ.ರಂತ.ುಟಿ ನಲ್ಲಿ ಹಾಕಲಾಗಿದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ. ಭಾಷೆ ಸರಳೀಕರಣ ಅನುಸರಣ ಹೊರೆಯ ಕಡಿತ ಮೊದಲಾದ ವಿಚಾರಗಳಲ್ಲಿ ಸಲಹೆ ಸೂಚನೆಗಳನ್ನು ಕೋರಲಾಗಿದೆ.

<><><><>

ಅಸಂಘಟಿತ ವಲಯದ ಕಾರ್ಮಿಕರನ್ನು ಪ್ರಧಾನ ಮಂತ್ರಿ ಮಾನ್-ಧನ್ ವಂತಿಗೆ ಆಧರಿತ ಪಿಂಚಣಿ ಯೋಜನೆಗೆ ನೋಂದಣಿ ಮಾಡುವ ಸಂದರ್ಭದಲ್ಲಿ ಯೋಜನೆಯ ಸಂಪೂರ್ಣ ಮಾಹಿತಿಯನ್ನು

ತಿಳಿಸಿ ಅರಿವು ಮೂಡಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯ ನಿರ್ದೇಶನ ನೀಡಿದರು. ಅವರು ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್-ಧನ್ ಯೋಜನೆಯ ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿನ ಕೃಷಿ ಕಾರ್ಮಿಕರು, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕರು, ಅಕ್ಷರ ದಾಸೋಹ ಅಡುಗೆ ಸಹಾಯಕರು, ಬೀದಿ ಬದಿ ವ್ಯಾಪಾರಸ್ಥರು, ಮನರೇಗಾ ಕಾರ್ಮಿಕರು, ಮನೆ ಕೆಲಸದವರು, ಕೈಮಗ್ಗ ಕಾರ್ಮಿಕರು ಸೇರಿದಂತೆ ಅಸಂಘಟಿತ ಅರ್ಹ ಕಾರ್ಮಿಕರನ್ನು ಗುರುತಿಸಿ, ಮಾರ್ಚ್ ೧೫ರ ವರೆಗೆ ನಡೆಯುವ ವಿಶೇಷ ನೋಂದಣಿ ಅಭಿಯಾನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಸಬೇಕು ಎಂದರು. ಕಾರ್ಮಿಕ ಅಧಿಕಾರಿ ಲಲಿತಾ ಸಾತೇನಹಳ್ಳಿ ಮಾತನಾಡಿ ೧೮ ರಿಂದ ೪೦ ವರ್ಷದೊಳಗಿನ ಅಸಂಘಟಿತ ಕಾರ್ಮಿಕರು ಎ.ಎಸ್.ಸಿ ಸೆಂಟರ್‌ಗಳಲ್ಲಿ ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಪ್ರತಿ ಸಲ್ಲಿಸಿ ಯೋಜನೆಗೆ ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದರು.

<><><><>

ಮಾನವ ಕಳ್ಳಸಾಗಾಣಿಕೆ ಮತ್ತು ಜೀತ ಪದ್ಧತಿ ನಿರ್ಮೂಲನೆಯಲ್ಲಿ ಪೊಲೀಸರ ಪಾತ್ರ ಕುರಿತ ಕಾರ್ಯಾಗಾರ, ಕೋಲಾರದಲ್ಲಿಂದು ಬೆಳಗ್ಗೆ ಆರಂಭವಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನಿಕಾ ಸಿಕ್ರಿವಾಲ್ ಕಾರ್ಯಾಗಾರದಲ್ಲಿ ಮಾತನಾಡಿ, ಮಹಿಳೆಯರು ಮತ್ತು ಮಕ್ಕಳನ್ನು ಶೋಷಣೆಗೆ ಒಳಪಡಿಸುವ ಜಾಲಗಳ ವಿರುದ್ಧ ಪೊಲೀಸರು ಅತ್ಯಂತ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದರು.

<><><><>

ಡಾ. ಮನಮೋಹನ್ ಸಿಂಗ್ ಬೆಂಗಳೂರು ವಿಶ್ವವಿದ್ಯಾಲಯದ ಆಶ್ರಯದಲ್ಲಿ, ನೀರು, ಇಂಧನ, ಪರಿಸರ ಮತ್ತು ಆರೋಗ್ಯ ಕುರಿತಾದ ತಾಂತ್ರಿಕ ಪ್ರದರ್ಶನ ಹಾಗೂ ಅಂತಾರಾಷ್ಟ್ರೀಯ ಸಮಾವೇಶವನ್ನು ನಾಳೆ ಆಯೋಜಿಸಲಾಗಿದೆ. ಒಂದು ದಿನದ ಈ ಸಮಾವೇಶದಲ್ಲಿ ದೇಶ-ವಿದೇಶದ ೬೦೦ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ೨೦೦ಕ್ಕೂ ಅಧಿಕ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>